ಕರ್ನಾಟಕ ಸರ್ಕಾರ

ಸಂಖ್ಯೆ: ಕಾಇ 88 ಎಲ್‌ಡಬ್ಲ್ಯೂಎ 2016(p-1)

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ:23–02–2017

## ಅಧಿಸೂಚನೆ

1948ರ ಕನಿಷ್ಠ ವೇತನ ಕಾಯ್ದೆ, (1948ರ ಕೇಂದ್ರಾಧಿನಿಯಮ XI) ರ ಪ್ರಕಾರ **"ಲೋಡಿಂಗ್ ಮತ್ತು ಅನ್‌ಲೋಡಿಂಗ್ ಕೆಲಸದಲ್ಲಿ ತೊಡಗಿರುವ ಕಾರ್ಮಿಕರುಗಳು"** ಈ ಉದ್ದಿಮೆಯಲ್ಲಿ ತೊಡಗಿರುವ ಕಾರ್ಮಿಕರಿಗೆ ಕನಿಷ್ಠ ವೇತನ ನಿಗಧಿಪಡಿಸಬೇಕೆಂದು ಕರ್ನಾಟಕ ಸರ್ಕಾರವು ಭಾವಿಸಿರುವುದರಿಂದ, ಸದರಿ ಉದ್ದಿಮೆಯನ್ನು ಕನಿಷ್ಠ ವೇತನ ಕಾಯ್ದೆಯ ಅನುಬಂಧದ ಭಾಗ–1ಕ್ಕೆ ಸೇರ್ಪಡೆ ಮಾಡುವ ಬಗ್ಗೆ ಸರ್ಕಾರವು ಕರಡು ಪ್ರಸ್ತಾವನೆಯನ್ನು ದಿನಾಂಕ:17–08–2016ರಂದು ಪ್ರಕಟಿಸಿ, ಇದರಿಂದ ಭಾದಿತರಾಗುವ ಹಾಗೂ ಸಂಬಂಧವಿರುವ ವ್ಯಕ್ತಿಗಳಿಂದ ಸಲಹೆ/ಆಕ್ಷೇಪಣೆಗಳನ್ನು ಸ್ವೀಕರಿಸಲು ಮೂರು ತಿಂಗಳ ಕಾಲಾವಧಿಯನ್ನು ನೀಡಲಾಗಿತ್ತು. ಸದರಿ ಅವಧಿಯಲ್ಲಿ ಈ ಬಗ್ಗೆ ಯಾವುದೇ ಸಲಹೆ/ಆಕ್ಷೇಪಣೆಗಳು ಸ್ವೀಕೃತಗೊಂಡಿರುವುದಿಲ್ಲ.

ಆದ್ದರಿಂದ ಕನಿಷ್ಠ ವೇತನ ಕಾಯ್ದೆ 1948ರ (1948ರ ಕೇಂದ್ರಾಧಿನಿಯಮ XI)ರ ಸೆಕ್ಷನ್ 27ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ **"ಲೋಡಿಂಗ್ ಮತ್ತು ಅನ್‌ಲೋಡಿಂಗ್ ಕೆಲಸದಲ್ಲಿ ತೊಡಗಿರುವ ಕಾರ್ಮಿಕರುಗಳು"** ಈ ಉದ್ದಿಮೆಯನ್ನು ಕನಿಷ್ಠ ವೇತನ ಕಾಯ್ದೆಯ ಅನುಬಂಧ ಭಾಗ–1ಕ್ಕೆ ಸೇರಿಸಲಾಗಿದೆ.

**ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ**
**ಮತ್ತು ಅವರ ಹೆಸರಿನಲ್ಲಿ.**

A.N. Radhamani 23/2/2017
[ಎ.ಎನ್.ರಾಧಾಮಣಿ]
ಸರ್ಕಾರದ ಅಧೀನ ಕಾರ್ಯದರ್ಶಿ
ಕಾರ್ಮಿಕ ಇಲಾಖೆ

ಕಾರ್ಮಿಕ ಆಯುಕ್ತರವರ ಕಛೇರಿ
ಸಂ.........
ದಿನಾಂಕ.........
ಬನ್ನೇರುಘಟ್ಟ ರಸ್ತೆ, ಬೆಂಗಳೂರು – 29.

C.E
23/02/2017
MWA(B)

**ಇವರಿಗೆ,**

ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಈ ಅಧಿಸೂಚನೆಯನ್ನು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಿ, ಸದರಿ ಪ್ರಕಟಣೆಯ 200 ಪ್ರತಿಗಳನ್ನು ಸರ್ಕಾರದ ಅಧೀನ ಕಾರ್ಯದರ್ಶಿ, ಕಾರ್ಮಿಕ ಇಲಾಖೆ, 4ನೇ ಮಹಡಿ, ವಿಕಾಸಸೌಧ, ಬೆಂಗಳೂರು–1 ಇವರಿಗೆ, ಕಳುಹಿಸುವಂತೆ ಕೋರಲಾಗಿದೆ.

**ಪ್ರತಿಗಳು:–**

1. ಕಾರ್ಮಿಕ ಆಯುಕ್ತರು, ಕಾರ್ಮಿಕ ಭವನ, ಬನ್ನೇರುಘಟ್ಟ ರಸ್ತೆ, ಬೆಂಗಳೂರು–29.
2. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ.(ಕಾರ್ಮಿಕ ಆಯುಕ್ತರ ಮುಖಾಂತರ)
3. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು.(ಕಾರ್ಮಿಕ ಆಯುಕ್ತರ ಮುಖಾಂತರ)
4. ನಿರ್ದೇಶಕರು, ವಾರ್ತಾ ಇಲಾಖೆ, ಶಿವಾಜಿನಗರ, ಬೆಂಗಳೂರು.(ಕಾರ್ಮಿಕ ಆಯುಕ್ತರ ಮುಖಾಂತರ)

03/02/2017

5. ಸದಸ್ಯ ಕಾರ್ಯದರ್ಶಿ, ಕರ್ನಾಟಕ ಕನಿಷ್ಠ ವೇತನ ಸಲಹಾ ಮಂಡಳಿ, ಕಾರ್ಮಿಕ ಆಯುಕ್ತರ ಕಚೇರಿ, ಕಾರ್ಮಿಕ ಭವನ, ಬನ್ನೇರುಘಟ್ಟ ರಸ್ತೆ, ಬೆಂಗಳೂರು.
6. ಎಲ್ಲಾ ಜಿಲ್ಲೆಗಳ ಕಾರ್ಮಿಕ ಅಧಿಕಾರಿಗಳಿಗೆ (ಕಾರ್ಮಿಕ ಆಯುಕ್ತರ ಮುಖಾಂತರ).
7. ಮಾನ್ಯ ಕಾರ್ಮಿಕ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಹಿರಿಯ ಆಪ್ತ ಕಾರ್ಯದರ್ಶಿ, ಕಾರ್ಮಿಕಇಲಾಖೆ, ವಿಕಾಸಸೌಧ, ಬೆಂಗಳೂರು.
9. ಸರ್ಕಾರದ ಉಪ ಕಾರ್ಯದರ್ಶಿ-1ರವರ ಆಪ್ತ ಕಾರ್ಯದರ್ಶಿ, ಕಾರ್ಮಿಕ ಇಲಾಖೆ,
10. ಶಾಖಾ ರಕ್ಷ ಕಡತ/ಹೆಚ್ಚುವರಿ ಪ್ರತಿ.